ಕರ್ನಾಟಕ ಸರ್ಕಾರ

# ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು-560009.

---

ಸಂಖ್ಯೆ:ಕೆಪಿಆರ್‌ಸಿ-ಜಿಪಿಎ/ಜಿಪಿಎಸ್/16/2024 ದಿನಾಂಕ :01.08.2024.

**ಇವರಿಗೆ,**
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೇ,

**ವಿಷಯ:** 2024-25 ನೇ ಸಾಲಿನ ವರ್ಗಾವಣೆಯನ್ನು ಕೌನ್ಸಿಲಿಂಗ್ ಮೂಲಕ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ:ಕೆಪಿಆರ್‌ಸಿ-ಎಂಐಎಸ್‌ಸಿ/125/2024 ದಿನಾಂಕ:25.06.2024.

*****

2024-25 ನೇ ಸಾಲಿನ ಆಯವ್ಯಯದಲ್ಲಿ ಸ್ಥಳೀಯ ಆಡಳಿತ ಸಂಸ್ಥೆಗಳಲ್ಲಿ ತ್ವರಿತ ಸೇವಾ ಪೂರೈಕೆ, ಭ್ರಷ್ಟಾಚಾರ ನಿಯಂತ್ರಣ ಮತ್ತು ದಕ್ಷತೆಯನ್ನು ಹೆಚ್ಚಿಸಲು 2024-25 ನೇ ಸಾಲಿನಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವರ್ಗಾವಣೆಯನ್ನು ಕೌನ್ಸಿಲಿಂಗ್ ಮೂಲಕ ಮಾಡಲಾಗುವುದು ಎಂದು ಘೋಷಿಸಲಾಗಿರುತ್ತದೆ ಹಾಗೂ ವರ್ಗಾವಣೆಯನ್ನು ಕೌನ್ಸಿಲಿಂಗ್ ಮೂಲಕ ಮಾಡಲು ಉಲ್ಲೇಖದನ್ವಯ ಸರ್ಕಾರದಿಂದ ಆದೇಶವನ್ನು ಹೊರಡಿಸಲಾಗಿದೆ. ಈ ಸಂಬಂಧ ತಂತ್ರಾಂಶ ಅಭಿವೃದ್ಧಿಪಡಿಸಿ https://rdprtransfer.karnataka.gov.in ವೆಬ್‌ಸೈಟ್‌ನಲ್ಲಿ ಆರೋಹಿಸಲಾಗಿರುತ್ತದೆ. ಸದರಿ ತಂತ್ರಾಂಶದ ಬಗ್ಗೆ ದಿನಾಂಕ:30.07.2024 ರಂದು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪಕಾರ್ಯದರ್ಶಿಗಳು ಹಾಗೂ ಜಿಲ್ಲಾ ಯೋಜನಾ ವ್ಯವಸ್ಥಾಪಕರು (DPM) ಇವರುಗಳಿಗೆ ತರಬೇತಿಯನ್ನು ನೀಡಲಾಗಿದೆ.

ಈ ಸಂಬಂಧ ಲಭ್ಯಗೊಳಿಸಿರುವ ಪರೀಕ್ಷಾರ್ಥ ಲಿಂಕ್ (UAT TEST LINK) http://106.51.236.147/rdpr-transfer/public ಮೂಲಕ ದಿನಾಂಕ:01.08.2024 ರಂದು ಅಪರಾಹ್ನ 3:00 ಗಂಟೆಗೆ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾ ಯೋಜನಾ ವ್ಯವಸ್ಥಾಪಕರು ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ವಿಷಯ ನಿರ್ವಾಹಕರು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ತಂತ್ರಾಂಶದ ಬಗ್ಗೆ ಅಗತ್ಯ ತರಬೇತಿಯನ್ನು ನೀಡುವುದು. ಮುಂದುವರೆದು, https://rdprtransfer.karnataka.gov.in ವೆಬ್‌ಸೈಟ್‌ನಲ್ಲಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸೇವಾ ವಿವರಗಳ ದತ್ತಾಂಶವನ್ನು ಕೆಳಕಂಡಂತೆ ನಿಗದಿಪಡಿಸಿರುವ ಅವಧಿಯೊಳಗೆ ಪರಿಶೀಲಿಸಿ, ಅನುಮೋದನೆ ನೀಡಲು ತಿಳಿಸಿದೆ.

| ಕ್ರ. ಸಂ | ವಿವರ | ನಿಗದಿಪಡಿಸಿದ ಕೊನೆಯ ದಿನಾಂಕ |
|---|---|---|
| 1. | ಎಲ್ಲಾ ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ (ಅಭಿವೃದ್ಧಿ) ರವರು https://rdprtransfer.karnataka.gov.in ವೆಬ್‌ಸೈಟ್‌ನಲ್ಲಿರುವ ದತ್ತಾಂಶ ಪರಿಶೀಲನೆ ಪೂರ್ಣಗೊಳಿಸುವುದು. | 05.08.2024 |
| 2. | ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸದರಿ ವೆಬ್‌ಸೈಟ್‌ನಲ್ಲಿ ಇಂದೀಕರಿಸಲಾಗಿರುವ ತಮ್ಮ ಸೇವಾ ವಿವರವನ್ನು ಪರಿಶೀಲಿಸಿ ಆಕ್ಷೇಪಣೆಗಳನ್ನು ಸಲ್ಲಿಸುವುದು. | 08.08.2024 |
| 3. | ಜಿಲ್ಲಾ ಪಂಚಾಯತಿಗಳ ಉಪ ಕಾರ್ಯದರ್ಶಿಗಳು ಸ್ವೀಕರಿಸಲಾದ ಆಕ್ಷೇಪಣೆಗಳ ಪರಿಶೀಲನೆ ಪೂರ್ಣಗೊಳಿಸುವುದು. | 12.08.2024 |
| 4. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವೆಬ್‌ಸೈಟ್‌ನಲ್ಲಿನ ದತ್ತಾಂಶವನ್ನು ಅನುಮೋದಿಸಿ, ಪೂರ್ಣಗೊಳಿಸುವುದು. | 14.08.2024 |

ಹೆಚ್ಚಿನ ಮಾಹಿತಿಗಾಗಿ: ಶ್ರೀ ಗಗನ್ ಎ.ಎಸ್, ಉಪ ನಿರ್ದೇಶಕರು-3, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ (ಮೊಬೈಲ್ ಸಂಖ್ಯೆ:9632385556) ಇವರನ್ನು ಸಂಪರ್ಕಿಸಲು ಕೋರಿದೆ.

ತಂತ್ರಾಂಶದಲ್ಲಿ ಸಮಸ್ಯೆಗಳು ಕಂಡುಬಂದಲ್ಲಿ ಈ ಕೆಳಕಂಡವರನ್ನು ಸಂಪರ್ಕಿಸಲು ಕೋರಿದೆ:

1. ಶ್ರೀ ಮೊಹಮ್ಮದ್ ವಸೀಮ್, ಸೀನಿಯರ್ ನೆಟ್‌ವರ್ಕ್ ಇಂಜಿನಿಯರ್, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು, ಮೊಬೈಲ್ ಸಂಖ್ಯೆ:6366683382.
2. ಶ್ರೀ ಶ್ರೀಕಾಂತ್, ಸೆಂಟರ್ ಫಾರ್ ಸ್ಮಾರ್ಟ್ ಗವರ್ನೆನ್ಸ್, ಬೆಂಗಳೂರು, ಮೊಬೈಲ್ ಸಂಖ್ಯೆ:9986626683.
3. ಶ್ರೀ ವಿನಯ್, ಸೆಂಟರ್ ಫಾರ್ ಸ್ಮಾರ್ಟ್ ಗವರ್ನೆನ್ಸ್, ಬೆಂಗಳೂರು, ಮೊಬೈಲ್ ಸಂಖ್ಯೆ:8861422700.

ತಮ್ಮ ವಿಶ್ವಾಸಿ,

ನಿರ್ದೇಶಕರು (ಆಡಳಿತ-1),
ಕರ್ನಾಟಕ ಪಂ.ರಾಜ್ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

1/8/2024.

**ಪ್ರತಿಯನ್ನು**:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಸಹಾಯಕರು.
4. ಉಪ ಕಾರ್ಯದರ್ಶಿ (ಆಡಳಿತ), ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
5. ನಿರ್ದೇಶಕರು (ಆಡಳಿತ-2), ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
6. ಉಪ ನಿರ್ದೇಶಕರು-1, 2, 3 ಮತ್ತು 4, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಉಪ ಕಾರ್ಯದರ್ಶಿಗಳು (ಅಭಿವೃದ್ಧಿ) - ಅಗತ್ಯ ಕ್ರಮಕ್ಕಾಗಿ.
8. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರವರ ಮುಖಾಂತರ).
9. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ- ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ. (ಉಪ ಕಾರ್ಯದರ್ಶಿಗಳು (ಅಭಿವೃದ್ಧಿ) ರವರ ಮುಖಾಂತರ).
10. ಕಛೇರಿ ಪ್ರತಿ.